ಮಂಗಳವಾರ 05.05.2026 ಬೆಂಗಳೂರು ಬೆಲೆ: 5ರೂ 2 ಪುಟಗಳು ಸಂಪುಟ 01 ಸಂಚಿಕೆ 181 Tuesday Bangalore Price: 5/- Rs 2 Pages Volume 01 Issue 182




PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ

ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com
epaper.digitalvarthe.com
Mob: 9538786812
Office: 9480847498




# ಬಾಗಲಕೋಟೆ, ದಾವಣಗೆರೆ ಉಪಚುನಾವಣೆ: ಕಾಂಗ್ರೆಸ್ ಭರ್ಜರಿ ಗೆಲುವು ಇದು ಜನರ ವಿಶ್ವಾಸದ ಗೆಲುವು ಎಂದ ಸಿಎಂ ಸಿದ್ದರಾಮಯ್ಯ

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಭರ್ಜರಿ ಗೆಲುವು ಸಾಧಿಸಿದ್ದು, ರಾಜ್ಯ ರಾಜಕೀಯದಲ್ಲಿ ಮಹತ್ವದ ಸಂದೇಶವನ್ನು ನೀಡಿದೆ. ಆಡಳಿತಾರೂಢ ಕಾಂಗ್ರೆಸ್ ತನ್ನದೇ ಕ್ಷೇತ್ರಗಳನ್ನು ಕಾಪಾಡಿಕೊಳ್ಳುವುದರ ಜೊತೆಗೆ ಮತದಾರರ ವಿಶ್ವಾಸವನ್ನು ಮತ್ತೊಮ್ಮೆ ದೃಢಪಡಿಸಿಕೊಂಡಿದೆ.



ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ ಅವರು ಬಿಜೆಪಿಯ ಅಭ್ಯರ್ಥಿಯನ್ನು ಸ್ಪಷ್ಟ ಅಂತರದಿಂದ ಸೋಲಿಸಿ ಜಯ ಸಾಧಿಸಿದರು. ಅದೇ ರೀತಿ ಬಾಗಲಕೋಟೆ ಕ್ಷೇತ್ರದಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರು ಗಮನಾರ್ಹ ಮುನ್ನಡೆಯೊಂದಿಗೆ ಗೆಲುವು ದಾಖಲಿಸಿದರು. ಈ ಎರಡೂ ಕ್ಷೇತ್ರಗಳು ಹಿಂದಿನಿಂದಲೂ ಕಾಂಗ್ರೆಸ್ ಬಲವಾದ ನೆಲೆಯಾಗಿ ಗುರುತಿಸಿಕೊಂಡಿದ್ದು, ಉಪಚುನಾವಣೆಯ ಫಲಿತಾಂಶಗಳು ಅದನ್ನು ಮತ್ತೊಮ್ಮೆ ಸಾಬೀತುಪಡಿಸಿವೆ.

ಈ ಉಪಚುನಾವಣೆಗಳು ಇಬ್ಬರು ಶಾಸಕರ ನಿಧನದ ಹಿನ್ನೆಲೆ ನಡೆದಿದ್ದವು. ಆಡಳಿತ ಪಕ್ಷಕ್ಕೆ ಇದು ಕೇವಲ ಸ್ಥಾನ ಉಳಿಸಿಕೊಳ್ಳುವ ಚುನಾವಣೆಯಲ್ಲ, ಸರ್ಕಾರದ ಕಾರ್ಯಕ್ಷಮತೆ ಮತ್ತು ಜನಾಭಿಪ್ರಾಯದ ಪರೀಕ್ಷೆಯಾಗಿ ಪರಿಣಮಿಸಿತ್ತು. ಪ್ರತಿಪಕ್ಷ ಬಿಜೆಪಿ ಕೂಡ ಈ ಚುನಾವಣೆಯನ್ನು ಪ್ರತಿಷ್ಠೆಯ ಪ್ರಶ್ನೆಯಾಗಿ ತೆಗೆದುಕೊಂಡು ಭಾರೀ ಪ್ರಚಾರ ನಡೆಸಿತ್ತು. ಆದಾಗ್ಯೂ, ಅಂತಿಮವಾಗಿ ಮತದಾರರು ಕಾಂಗ್ರೆಸ್ ಪರ ತೀರ್ಮಾನ ತೆಗೆದುಕೊಂಡಿದ್ದಾರೆ.

ಫಲಿತಾಂಶದ ನಂತರ ಮುಖ್ಯಮಂತ್ರಿ ಸಾಮಾಜಿಕ ಜಾಲತಾಣ 'X' ನಲ್ಲಿ ಪ್ರತಿಕ್ರಿಯೆ ನೀಡಿ, "ಬಾಗಲಕೋಟೆ ಮತ್ತು ದಾವಣಗೆರೆ ಉಪಚುನಾವಣೆಯ ಗೆಲುವು ನಮ್ಮ ಸರ್ಕಾರದ ಮೇಲಿನ ಜನರ ವಿಶ್ವಾಸದ ಪ್ರತಿಫಲ. ಜನರಿಗೆ ನೀಡಿದ ಭರವಸೆಗಳನ್ನು ನಿಷ್ಠೆಯಿಂದ ಅನುಷ್ಠಾನಗೊಳಿಸುತ್ತಿರುವುದಕ್ಕೆ ಈ ಗೆಲುವು ಸಾಕ್ಷಿ" ಎಂದು ಹೇಳಿದ್ದಾರೆ.

ಈ ಗೆಲುವಿನ ಮೂಲಕ ಕಾಂಗ್ರೆಸ್ ಸರ್ಕಾರದ "ಗ್ಯಾರಂಟಿ" ಯೋಜನೆಗಳು, ಅಭಿವೃದ್ಧಿ ಕಾರ್ಯಗಳು ಹಾಗೂ ಆಡಳಿತ ಶೈಲಿಗೆ ಜನರಿಂದ ಮನ್ನಣೆ ದೊರಕಿದೆಯೆಂಬ ಸಂದೇಶ ಸ್ಪಷ್ಟವಾಗಿದೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳ ಮತದಾರರು ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪರ ಮತ ಹಾಕಿರುವುದು ಪಕ್ಷದ ಸಾಮಾಜಿಕ ಆಧಾರವನ್ನು ಮತ್ತಷ್ಟು ಬಲಪಡಿಸಿದೆ.

ಚುನಾವಣಾ ಅವಧಿಯಲ್ಲಿ ಟಿಕೆಟ್ ಹಂಚಿಕೆ ಕುರಿತ ಅಸಮಾಧಾನ, ಸ್ಥಳೀಯ ಮಟ್ಟದ ಗೊಂದಲಗಳು ಸೇ-ರಿದಂತೆ ಕೆಲವು ಆಂತರಿಕ ಸವಾಲುಗಳು ಎದುರಾಗಿದ್ದರೂ, ಪಕ್ಷದ ಸಂಘಟನೆ ಶಕ್ತಿ ಹಾಗೂ ನಾಯಕತ್ವದ ಸಮನ್ವಯದಿಂದ ಕಾಂಗ್ರೆಸ್ ಗೆಲುವಿನ ಹಾದಿ ಹಿಡಿದಿದೆ. ಪ್ರಮುಖ ನಾಯಕರ ಪ್ರಚಾರ, ಸ್ಥಳೀಯ ಕಾರ್ಯಕರ್ತರ ಶ್ರಮ ಹಾಗೂ ಮತದಾರರ ಜೊತೆ ನೇರ ಸಂಪರ್ಕ ಈ ಫಲಿತಾಂಶಕ್ಕೆ ಕಾರಣವಾಗಿದೆ.

ರಾಜಕೀಯ ವಿಶ್ಲೇಷಕರ ಪ್ರಕಾರ, ಈ ಉಪಚುನಾವಣೆ ಫಲಿತಾಂಶವು ಕೇವಲ ಎರಡು ಕ್ಷೇತ್ರಗಳ ಗೆಲುವಷ್ಟೇ ಅಲ್ಲ, ಮುಂದಿನ ರಾಜಕೀಯ ಸಮೀಕರಣಗಳ ಮೇಲೂ ಪರಿಣಾಮ ಬೀರುವ ಸೂಚನೆ ನೀಡುತ್ತದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಸ್ಥಿರತೆ, ನಾಯಕತ್ವದ ವಿಶ್ವಾಸಾರ್ಹತೆ ಹಾಗೂ ಯೋಜನೆಗಳ ಸ್ವೀಕಾರ್ಯತೆ ಹೆಚ್ಚುತ್ತಿದೆ ಎಂಬ ಸಂದೇಶವೂ ಇದರಿಂದ ಹೊರಬರುತ್ತಿದೆ.

ಇದರಿಂದಾಗಿ, ಮುಂದಿನ ಚುನಾವಣಾ ರಾಜ-ಕೀಯದಲ್ಲೂ ಕಾಂಗ್ರೆಸ್ ಇನ್ನಷ್ಟು ಆತ್ಮವಿಶ್ವಾಸದಿಂದ ಮುಂದುವ-ರಿಯುವ ಸಾಧ್ಯತೆ ಇದೆ. ಇದೇ ವೇಳೆ ಪ್ರತಿಪಕ್ಷಗಳಿಗೆ ಇದು ತಂತ್ರ ಪುನರ್‌ವಿಮರ್ಶೆ ಮಾಡುವ ಅಗತ್ಯವನ್ನೂ ಉಂಟುಮಾಡಿದೆ.

## ಗ್ಯಾರಂಟಿ ಯೋಜನೆಗಳಿಗೆ ಮತದಾರರ ಮನ್ನಣೆ: ಡಿಸಿಎಂ ಡಿಕೆಶಿ

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಾದ ಸಮರ್ಥ್ ಶಾಮನೂರು ಮತ್ತು ಉಮೇಶ್ ಮೇಟಿ ಅವರು ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ರಾಜ್ಯ ರಾಜಕೀಯದಲ್ಲಿ ಚರ್ಚೆಗಳು ಚುರುಕುಗೊಂಡಿವೆ. ಈ ಗೆಲುವಿಗೆ ಪ್ರತಿಕ್ರಿಯೆ ನೀಡಿರುವ ಉಪಮುಖ್ಯಮಂತ್ರಿ ಶಿವಕುಮಾರ್ ಅವರು ಸಾಮಾಜಿಕ ಜಾಲತಾಣಗಳ ಮೂಲಕ ಅಭಿನಂದನೆಗಳನ್ನು ತಿಳಿಸಿದ್ದಾರೆ.



ತಮ್ಮ ಸಂದೇಶದಲ್ಲಿ ಅವರು, ಈ ಫಲಿತಾಂಶವು ರಾಜ್ಯ ಸರ್ಕಾರದ ಜನಪರ ಆಡಳಿತಕ್ಕೆ ಮತ್ತು ಗ್ಯಾರಂಟಿ ಯೋಜನೆಗಳಿಗೆ ಮತದಾರರು ನೀಡಿದ ಸ್ಪಷ್ಟ ಬೆಂಬಲವಾಗಿದೆ ಎಂದು ಹೇಳಿದ್ದಾರೆ. "ನುಡಿದಂತೆ ನಡೆಯುವ ಸರ್ಕಾರದ ಮೇಲೆ ಜನರು ಮತ್ತೊಮ್ಮೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಕಾರ್ಯಕರ್ತರ ಅವಿರತ ಶ್ರಮ ಮತ್ತು ಜನರ ಆಶೀರ್ವಾದದಿಂದ ಕಾಂಗ್ರೆಸ್‌ಗೆ ಈ ಜಯ ದೊರಕಿದೆ," ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಹಿರಿಯ ನಾಯಕರಾದ ಶಾಮನೂರು ಶಿವಶಂಕರಪ್ಪ ಹಾಗೂ ಹೆಚ್.ವೈ. ಮೇಟಿ ಅವರ ನಿಧನದಿಂದ ತೆರವಾದ ಈ ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಗೆ ರಾಜಕೀಯವಾಗಿ ವಿಶೇಷ ಮಹತ್ವವಿತ್ತು. ಅವರ ಅಭಿವೃದ್ಧಿ ಪರಂಪರೆಯನ್ನು ಮುಂದುವರಿಸುವ ಭರವಸೆಯೊಂದಿಗೆ ಮತದಾರರು ಮತ್ತೆ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲ ನೀಡಿದ್ದಾರೆ ಎಂಬುದು ಫಲಿತಾಂಶದಿಂದ ಸ್ಪಷ್ಟವಾಗಿದೆ.

ಮುಂದುವರಿದು, ಈ ಗೆಲುವಿಗೆ ಕಾರಣ-ರಾದ ಪ್ರತಿಯೊಬ್ಬ ಮುಖಂಡರು, ಕಾರ್ಯಕರ್ತರು, ಬೆಂಬಲಿಗರು ಹಾಗೂ ಮತದಾರರಿಗೆ ಅವರು ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದ್ದಾರೆ.

ಜೊತೆಗೆ, ಹೊಸದಾಗಿ ಆಯ್ಕೆಯಾದ ಶಾಸಕರು ಜನರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡಲಿದ್ದಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಜಾರಿಯಲ್ಲಿರುವ ಗ್ಯಾರಂಟಿ ಯೋಜನೆಗಳು ಸಾಮಾನ್ಯ ಜನರ ಬದುಕಿಗೆ ಸ್ಪರ್ಶಿಸಿರುವುದರಿಂದಲೇ ಈ ರೀತಿಯ ಜನಮತ ಕಾಂಗ್ರೆಸ್ ಪರವಾಗಿ ತಿರುಗಿದೆ ಎಂದು ಪಕ್ಷದ ವಲಯದಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ. ಈ ಫಲಿತಾಂಶವು ಮುಂದಿನ ರಾಜಕೀಯ ಬೆಳವಣಿಗೆಗಳಿಗೆ ದಿಕ್ಕು ನೀಡುವ ಸಾಧ್ಯತೆಯೂ ಇದೆ.

## ಗ್ಯಾರಂಟಿ ಸರ್ಕಾರಕ್ಕೆ ಜನಮನ್ನಣೆ: ಪ್ರಿಯಾಂಕ್ ಖರ್ಗೆ

ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿನ ಹಿನ್ನೆಲೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಪ್ರತಿಕ್ರಿಯೆ ನೀಡಿದ್ದಾರೆ.

"ಈ ಉಪಚುನಾವಣಾ ಫಲಿತಾಂಶ ಗ್ಯಾರಂಟಿ ಸರ್ಕಾರದ ಮೇಲೆ ಜನತೆ ಇಟ್ಟಿರುವ ನಂಬಿಕೆ ಮತ್ತು ವಿಶ್ವಾಸವನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ. ಬಿಜೆಪಿಯವರ ಅಪಪ್ರಚಾರಗಳಿಗೆ ಮತದಾರರು ಮನ್ನಣೆ ನೀಡಿಲ್ಲ. ನಮ್ಮ ಸರ್ಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಜನರು ಮೆಚ್ಚಿಕೊಂಡು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದಾರೆ," ಎಂದು ಅವರು ತಿಳಿಸಿದ್ದಾರೆ.

"ರಾಜ್ಯದಲ್ಲಿ ಗ್ಯಾರಂಟಿ ಸರ್ಕಾರದ ಮೇಲೆ ಜನಾಶೀರ್ವಾದ ಇದೆ ಎನ್ನುವುದು ಮತ್ತೊಮ್ಮೆ ಸಾಬೀತಾಗಿದೆ. ದಾವಣಗೆರೆ ಹಾಗೂ ಬಾಗಲಕೋಟೆ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿದ ಪ್ರತಿಯೊಬ್ಬ ಮತದಾರ, ಕಾರ್ಯಕರ್ತ ಮತ್ತು ಮುಖಂಡರಿಗೆ ಹೃತ್ಪೂರ್ವಕ ಧನ್ಯವಾದಗಳು," ಎಂದು ಹೇಳಿದ್ದಾರೆ.

### ಬಾಗಲಕೋಟೆ ಕ್ಷೇತ್ರ

ಉಮೇಶ್ ಹುಲ್ಲಪ್ಪ ಮೇಟಿ (ಕಾಂಗ್ರೆಸ್)
ಒಟ್ಟು ಮತಗಳು: 98,919
ಗೆಲುವಿನ ಅಂತರ: +22,332

ಚರಣ್ತಿಮಠ ವೀರಭದ್ರಯ್ಯ (ವೀರಣ್ಣ) (ಬಿಜೆಪಿ)
ಒಟ್ಟು ಮತಗಳು: 76,587

### ದಾವಣಗೆರೆ ದ. ಕ್ಷೇತ್ರ

ಸಮರ್ಥ್ ಶಾಮನೂರು ಮಲ್ಲಿಕಾರ್ಜುನ (ಕಾಂಗ್ರೆಸ್)
ಒಟ್ಟು ಮತಗಳು: 69,578
ಗೆಲುವಿನ ಅಂತರ: +5,708

ಶ್ರೀನಿವಾಸ ಟಿ. ದಾಸಕರಿಯಪ್ಪ (ಬಿಜೆಪಿ)
ಒಟ್ಟು ಮತಗಳು: 63,870

ಅಫ್ಸರ್ ಕೊಡ್ಲಿಪೇಟೆ (ಎಸ್.ಡಿ.ಪಿ.ಐ)
ಒಟ್ಟು ಮತಗಳು: 18,975

